(69)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಶಿವಕುಮಾರ್.ಕೆ ಇವರು ನಿಯಮ-72ರಡಿ ಕೇಳಿರುವ ಗಮನ ಸೆಳೆಯುವ ಸೂಚನೆಗೆ ಮಾಹಿತಿ.**

**ಪ್ರಶ್ನೆ: ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಮತ್ತು ಕೃಷಿ ವಿಜ್ಞಾನ ವಿಶ್ವವಿದ್ಯಾಲಯಗಳಲ್ಲಿ ವಿವಿಧ ವಿಷಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳಿದ್ದರೂ ನಿರುದ್ಯೋಗಿಗಳ ಸಂಖ್ಯೆ ಹೆಚ್ಚಿರುವ ಕಾರಣ ಕೃಷಿ ಉತ್ಪಾದಕತೆ ಮತ್ತು ದಕ್ಷತೆ ಬಲಪಡಿಸಲು, ಯಂತ್ರೋಪಕರಣಗಳ ವಿನ್ಯಾಸ, ನೀರಾವರಿ ನಿರ್ವಹಣೆ, ಆಹಾರ ಸಂರಕ್ಷಣೆ ಇತ್ಯಾದಿ ವಿಷಯಗಳ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸಲು ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಪದವೀಧರರಿಗೆ ಅನುಕೂಲವಾಗುವಂತೆ ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸುವ ಬಗ್ಗೆ ನಿಯಮ 72 ರ ಅಡಿಯಲ್ಲಿ ಮಾನ್ಯ ಕೃಷಿ ಸಚಿವರ ಗಮನ ಸೆಳೆಯಬಯಸುತ್ತೇನೆ.**

**ಉತ್ತರ:**-ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸುವ ಬಗ್ಗೆ ದಿನಾಂಕ:02.03.2023 ರಲ್ಲಿ ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. (ಆದೇಶದ ಪ್ರತಿಯನ್ನು ಲಗತ್ತಿಸಿದೆ).

ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯು ಸಭೆ ನಡಸಿರುತ್ತದೆ ಹಾಗೂ ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಸ್ಥಾಪಿಸುವ ಕುರಿತು ಪರಿಶೀಲನಾ ಹಂತದಲ್ಲಿರುತ್ತದೆ.

AGRI/457/AGS/2025

**(ಎನ್. ಚಲುವರಾಯಸ್ವಾಮಿ )**
**ಕೃಷಿ ಸಚಿವರು**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ನೂತನವಾಗಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಿ ಅಧ್ಯಯನ ಮಾಡಿ ವರದಿ ಸಲ್ಲಿಸಲು ಪರಿಣಿತರ ಸಮಿತಿ ರಚಿಸುವ ಕುರಿತು.

ಓದಲಾಗಿದೆ: ಮಾನ್ಯ ಕೃಷಿ ಸಚಿವರ ಟಿಪ್ಪಣಿ ಸಂಖ್ಯೆ: ಕೃಸಕ/934/2023, ದಿನಾಂಕ:15.02.2023

*****

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ:14.02.2023 ರ ಮಾನ್ಯ ಕೃಷಿ ಸಚಿವರ ಟಿಪ್ಪಣಿಯಲ್ಲಿ ಕೃಷಿ ಇಂಜಿನಿಯರಿಂಗ್ ಕಾಲೇಜ್, ರಾಯಚೂರು ಹಾಗೂ ಬೆಂಗಳೂರಿನ ವಿದ್ಯಾರ್ಥಿಗಳ ತಂಡವು ಖುದ್ದಾಗಿ ಭೇಟಿ ಮಾಡಿ ತಮಿಳುನಾಡು ಮತ್ತು ಹಿಮಾಚಲ ಪ್ರದೇಶದಲ್ಲಿ ಪ್ರತ್ಯೇಕ ಕೃಷಿ ತಾಂತ್ರಿಕ ಇಲಾಖೆ/ನಿರ್ದೇಶನಾಲಯ ಸ್ಥಾಪಿಸಲಾಗಿದ್ದು, ರಾಜ್ಯದಲ್ಲಿಯೂ ಸಹ ಪ್ರತ್ಯೇಕವಾಗಿ ಕೃಷಿ ತಾಂತ್ರಿಕ ಇಲಾಖೆ/ನಿರ್ದೇಶನಾಲಯ ಸ್ಥಾಪಿಸಿ, ಕೃಷಿ ತಾಂತ್ರಿಕ ಪದವೀಧರರಿಗೆ ಸರ್ಕಾರದಲ್ಲಿ ಸೇವೆ ಸಲ್ಲಿಸಲು ಹಾಗೂ ಅವರ ಪರಿಣಿತಿ ಮತ್ತು ಜ್ಞಾನವನ್ನು ರೈತರ ಸೇವೆಗಾಗಿ ಮೀಸಲಿಡಲು ಒಂದು ಸದಾವಕಾಶವನ್ನು ನೀಡುವಂತೆ ಕೋರಿರುವ ಮನವಿಯ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಕುರಿತು ಅಧ್ಯಯನ ಮಾಡಿ ಪರಿಶೀಲಿಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ರಾಷ್ಟ್ರಮಟ್ಟದ ಕೃಷಿ ಇಂಜಿನಿಯರಿಂಗ್ ಹಾಗೂ ಕೃಷಿ ತಜ್ಞರು ಮತ್ತು ಪರಿಣಿತರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸುವಂತೆ ಸೂಚಿಸಿರುತ್ತಾರೆ.

ಮೇಲ್ಕಾಣಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವಿವಿಧ ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾಗಿರುವ ಮನವಿ/ಅರ್ಜಿಗಳನ್ನು ಪರಿಶೀಲಿಸಿ, ರಾಜ್ಯದಲ್ಲಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಕುರಿತು ಅಧ್ಯಯನ ಮಾಡಿ ಪರಿಶೀಲಿಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ಅಧಿಕಾರಿಗಳು, ಕೃಷಿ ತಜ್ಞರು ಮತ್ತು ಪರಿಣಿತರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲು ನಿರ್ಧರಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: AGRI-AGS/209/2022 ಬೆಂಗಳೂರು, ದಿನಾಂಕ:02.03.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವಿವಿಧ ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾಗಿರುವ ಮನವಿ/ಅರ್ಜಿಗಳನ್ನು ಪರಿಶೀಲಿಸಿ, ರಾಜ್ಯದಲ್ಲಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಕುರಿತು ಅಧ್ಯಯನ ಮಾಡಿ ಪರಿಶೀಲಿಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ಈ ಕೆಳಕಂಡ ಸಮಿತಿಯನ್ನು ರಚಿಸಿದೆ ಹಾಗೂ ಅವಶ್ಯವಿದ್ದಲ್ಲಿ ಸಮಿತಿಯು ಒಬ್ಬ ವಿಶೇಷ ಪರಿಣಿತರನ್ನು ಸಮಿತಿಯ ಸಹ ಸದಸ್ಯರನ್ನಾಗಿ ನೇಮಕ ಮಾಡಿಕೊಳ್ಳಲು ಅಧಿಕಾರ ಹೊಂದಿರುತ್ತದೆ.

| ಕ್ರ.ಸಂ. | ಹುದ್ದೆಯ ವಿವರ | ಷರಾ |
|---|---|---|
| 1. | ಕೃಷಿ ಆಯುಕ್ತರು, ಕೃಷಿ ಇಲಾಖೆ | ಅಧ್ಯಕ್ಷರು |
| 2. | ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ | ಸದಸ್ಯರು |
| 3. | ಕೃಷಿ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 4. | ನಿರ್ದೇಶಕರು, ಸೆಕೆಂಡರಿ ಕೃಷಿ ನಿರ್ದೇಶನಾಲಯ | ಸದಸ್ಯರು |
| 5. | ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು | ಸದಸ್ಯರು |

4/3/23

Office of the Registrar
Inward No. 6968
Date 4/3/23

| | | |
|---|---|---|
| 6. | ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ರಾಯಚೂರು | ಸದಸ್ಯರು |
| 7. | ಡೀನ್ ಕೃಷಿ ಕಾಲೇಜು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು | ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
02/03/2023
(ಜೋನ್ ಪ್ರಕಾಶ್ ರೋಡ್ರಿಗಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಸೇವೆಗಳು).

ಇವರಿಗೆ:-

1. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
3. ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.
4. ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ರಾಯಚೂರು.
5. ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
6. ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ನಿರ್ದೇಶಕರು, ಸೆಕೆಂಡರಿ ಕೃಷಿ ನಿರ್ದೇಶನಾಲಯ, ಶೇಷಾದ್ರಿ ರಸ್ತೆ, ಬೆಂಗಳೂರು
8. ಡೀನ್, ಕೃಷಿ ಕಾಲೇಜು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

ಪ್ರತಿಯನ್ನು:

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.